

# ಸುದ್ದಿ-ಸಂಚಾರಿ

ಇದು ನಮ್ಮೂರ ಸುದ್ದಿ ವಾಹಿನಿ

**ಬಿಜೆಪಿ**

18ಕ್ಕೆ ಬಿವೈಆರ್ ನಾಮಪತ್ರ ಸಲ್ಲಿಕೆ

ಮಂಗಳವಾರ,16ನೇ ಏಪ್ರಿಲ್,2024 | ● ಸಂಪುಟ-1 | ● ಸಂಚಿಕೆ-56 | ● ಉಚಿತ | ● | ● www.suddisanchaari.in





## ನಿಧನ ವಾರ್ತೆ

ಶಿಕಾರಿಪುರ ಪಟ್ಟಣದ ದೊಡ್ಡಪೇಟೆಯ ಶ್ರೀಶೈಲ ಬಡಾವಣೆಯ ವಾಸಿಗಳಾದ ಶ್ರೀ ಕುರ್ತುಕೋಟಿ ಇವರ ಧರ್ಮಪತ್ನಿ ಶ್ರೀಮತಿ ಶೈಲಜಾ ಉಡಚಣ ಈಚೆಗೆ ನಿಧನರಾದರು,ಇವರು ಶಿರಾಳಕೊಪ್ಪ ಪಟ್ಟಣದ ಪುರಸಭಾ ಸದಸ್ಯರಾಗಿ ಸೇವೆ ಸಲ್ಲಿಸಿದ್ದರು. ಇವರ ಪತಿ ಶಿವ ಬ್ಯಾಂಕ್ ನಿರ್ದೇಶಕರಾಗಿದ್ದಾರೆ. ಇವರ ಅಂತ್ಯ ಸಂಸ್ಕಾರವನ್ನು ಶಿಕಾರಿಪುರ ಪಟ್ಟಣದ ವೀರಶೈವ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು

**ಸುದ್ದಿ-ಸಂಚಾರಿ**

## ಶಿವಮೊಗ್ಗ ಗೀತಾ ಶಿವರಾಜ್ ಕುಮಾರ ನಾಮಪತ್ರ ಸಲ್ಲಿಕೆ

# ಕಾಂಗ್ರೆಸ್ ಒಗ್ಗಟ್ಟಿನ ಮಂತ್ರ, ಹರಿದು ಬಂದ ಜನಸಾಗರ

**ಸುದ್ದಿ-ಸಂಚಾರಿ**

ಶಿವಮೊಗ್ಗ: ಕಾಂಗ್ರೆಸ್ ಅಭ್ಯರ್ಥಿ ಗೀತಾ ಶಿವರಾಜಕುಮಾರ್ ಅವರ ನಾಮಪತ್ರ ಸಲ್ಲಿಕೆ ವೇಳೆ ನಡೆದ ಮೆರವಣಿಗೆ ಚುನಾವಣೆಗೆ ಮುನ್ನವೇ ಪಕ್ಷದ ಶಕ್ತಿ ಪ್ರದರ್ಶನಕ್ಕೆ ವೇದಿಕೆಯಾಗಿ ಮಾರ್ಪಟ್ಟಿತ್ತು.ಮಧ್ಯಾಹ್ನದ ಉರಿ ಬಿಸಿಲನ್ನು ಲೆಕ್ಕಿಸದೇ ಬೆಂಬಲಿಗರ ಪ್ರವಾಹವೇ ಶಿವಮೊಗ್ಗಕ್ಕೆ ಹರಿದುಬಂದಿತ್ತು. ಬೆಳಿಗ್ಗೆ ಪತಿ ಶಿವರಾಜಕುಮಾರ್ ಅವರೊಂದಿಗೆ ತೆರಳಿ ನಾಮಪತ್ರ ಸಲ್ಲಿಸಿದ ಗೀತಾ, ನಂತರ ಕಾಂಗ್ರೆಸ್ ಪಕ್ಷದಿಂದ ಇಲ್ಲಿನ ರಾಮಣ್ಣ ಶ್ರೇಷ್ಠಿ ಪಾರ್ಕ್‌ನಿಂದ ಆಯೋಜಿಸಿದ್ದ ಮೆರವಣಿಗೆಯಲ್ಲಿ ಪಾಲ್ಗೊಂಡರು.ಶಿವಮೊಗ್ಗ ಲೋಕಸಭಾ ಕ್ಷೇತ್ರದ ವಿವಿಧೆಡೆಯಿಂದ ಭಾರಿ ಸಂಖ್ಯೆಯಲ್ಲಿ ಬಂದಿದ್ದ ಬೆಂಬಲಿಗರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.ಬೆಳಗಾವಿಯಲ್ಲಿದ್ದ ಡಿಸಿಎಂ ಡಿ.ಕೆ.ಶಿವಕುಮಾರ್ ಶಿವಮೊಗ್ಗಕ್ಕೆ ಬರುವುದು ವಿಳಂಬವಾಯಿತು. ಹೀಗಾಗಿ ಸಚಿವ ಮಧು ಬಂಗಾರಪ್ಪ ನೇತೃತ್ವದಲ್ಲಿ ಜಿಲ್ಲೆಯ ಕಾಂಗ್ರೆಸ್ ಮುಖಂಡರೇ ಮೆರವಣಿಗೆಯ ನೇತೃತ್ವ ವಹಿಸಿದ್ದರು. ಮೆರವಣಿಗೆಯು ಗಾಂಧಿ ಬಜಾರ್ ಮುಖ್ಯರಸ್ತೆಯ ಮೂಲಕ ಶಿವಪ್ಪ ನಾಯಕ ವೃತ್ತಕ್ಕೆ ಬಂದಾಗ ಅಲ್ಲಿ ಗೀತಾ ಶಿವರಾಜಕುಮಾರ್ ಅವರಿಗೆ ಕ್ರೇನ್ ಮೂಲಕ ಬೃಹತ್ ಸೇಬು ಹಣ್ಣಿನ ಹಾರ ಹಾಕಿ ಶುಭ ಕೋರಲಾಯಿತು.

## ಕಾಂಗ್ರೆಸ್ ಅಧ್ಯಕ್ಷ ಡಿ.ಕೆ.ಶಿವಕುಮಾರ್




ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ‘ದಾನ ಧರ್ಮ ಮಾಡುವ ಕೈ (ಕಾಂಗ್ರೆಸ್) ಅಧಿಕಾರದಲ್ಲಿ, ಕಮಲ (ಬಿಜೆಪಿ) ಕೆಸರಲ್ಲಿದ್ದರೆ ಚಂದ. ಅದೇ ಉದ್ದೇಶದಿಂದ ಕಾಂಗ್ರೆಸ್ ಅಭ್ಯರ್ಥಿ ಗೀತಾ ಶಿವರಾಜಕುಮಾರ್ ಅವರಿಗೆ ಮತ ನೀಡಿ ಹರಸಬೇಕು’ ಎಂದು ಮನವಿ ಮಾಡಿದರು.

‘ಎಚ್.ಡಿ. ಕುಮಾರಸ್ವಾಮಿ ಅವರು ಗ್ಯಾರಂಟಿ ಯೋಜನೆಯನ್ನು ಕೀಳಾಗಿ ಜರಿದಿದ್ದಾರೆ. ಇದು ಖಂಡನೀಯ. ರಾಜ್ಯದೆಲ್ಲೆಡೆ ಈ ಬಗ್ಗೆ ಹೋರಾಟ ಮಾಡಬೇಕು’ ಎಂದರು.

ಲೋಕಸಭಾ ಚುನಾವಣೆಯ ಪ್ರಣಾಳಿಕೆಯಲ್ಲಿ ಮಹಿಳೆಯರ ಕಲ್ಯಾಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಪ್ರಣಾಳಿಕೆಯಲ್ಲಿ ಸಾಮಾಜಿಕ ನ್ಯಾಯ, ಲಿಂಗ ಸಮಾನತೆ, ಅಲ್ಪಸಂಖ್ಯಾತರ ವೈಯಕ್ತಿಕ ಕಾನೂನುಗಳ ಸುಧಾರಣೆ, ಹಿರಿಯ ನಾಗರಿಕರು, ಅಂಗವಿಕಲರ ಅಭ್ಯುದಯಕ್ಕೆ ಒತ್ತು ನೀಡಲಾಗಿದೆ’ ಎಂದು ತಿಳಿಸಿದರು.

‘ಮಾಜಿ ಮುಖ್ಯಮಂತ್ರಿ, ದಿವಂಗತ ಎಸ್.ಬಂಗಾರಪ್ಪ ಅವರ ಕನಸುಗಳಿಗೆ ಜೀವ ತುಂಬಲು ಗೀತಾ ಅವರಿಗೆ ಮತ ನೀಡಿ ಆಶೀರ್ವದಿಸಬೇಕು’ ಎಂದು ಕೋರಿದರು.

ಕೊನೆಯ ಹಂತದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಬಂದು ಮೆರವಣಿಗೆಗೆ ಸೇರಿಕೊಂಡರು. ಮೆರವಣಿಗೆಗೆ ವಾದ್ಯ ಮೇಳ, ಡೊಳ್ಳು, ಬೊಂಬೆ ಕುಣಿತ ಸಾಥ್ ನೀಡಿದವು. ಸೀನಪ್ಪ ಶೆಟ್ಟಿ ವೃತ್ತದಲ್ಲೂ ಬೆಂಬಲಿಗರು ಸೇಬು ಹಾರ ಹಾಕಿ, ಹೂವಿನ ಮಳೆ ಸುರಿಸಿದರು.ಮೆರವಣಿಗೆಯಲ್ಲಿ ಮಾಜಿ ಮುಖ್ಯಮಂತ್ರಿ, ದಿವಂಗತ ಎಸ್. ಬಂಗಾರಪ್ಪ ಅವರ ಪ್ಲೇಕಾರ್ಡ್ ರಾರಾಜಿಸಿದವು. ಶಾಸಕರಾದ ಬೇಳೂರು ಗೋಪಾಲಕೃಷ್ಣ, ಶಿರಸಿಯ ಭೀಮಣ್ಣ ನಾಯ್ಕ, ಭದ್ರಾವತಿಯ ಬಿ.ಕೆ.ಸಂಗಮೇಶ್ವರ, ಮಾಜಿ ಸಚಿವ ಕಿಮ್ಮನೆ ರತ್ನಾಕರ, ಕೆಪಿಸಿಸಿ ಕಾರ್ಯಾಧ್ಯಕ್ಷ ಮಂಜುನಾಥ ಭಂಡಾರಿ, ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಆರ್.ಪ್ರಸನ್ನಕುಮಾರ್, ಮಾಜಿ ಶಾಸಕರಾದ ಕೆ.ಗೋಪಾಲ ಪೂಜಾರಿ, ಬಿ.ಕೆ. ಸುಕುಮಾರ್ ಶೆಟ್ಟಿ, ಕೆಪಿಸಿಸಿ ವಕ್ತಾರ ಆಯನೂರು ಮಂಜುನಾಥ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎನ್.ರಮೇಶ್, ಸೂಡಾ ಅಧ್ಯಕ್ಷ ಎಚ್.ಎಸ್. ಸುಂದರೇಶ್, ಕಾಂಗ್ರೆಸ್ ಮುಖಂಡರಾದ ಎಂ.ಶ್ರೀಕಾಂತ್, ಎಚ್.ಸಿ.ಯೋಗೀಶ್, ಶ್ರೀನಿವಾಸ ಕರಿಯಣ್ಣ ಪಾಲ್ಗೊಂಡಿದ್ದರು.



ಮಾಳಗೊಂಡನಕೊಪ್ಪ

ಶಿರಾಳಕೊಪ್ಪ ಸಮೀಪದ ಐತಿಹಾಸಿಕ ಕ್ಷೇತ್ರ ಮಾಳಗೊಂಡನಕೊಪ್ಪದಲ್ಲಿ ಅನಿಮಿಷಾರಣ್ಯರ ಜಾತ್ರಾ ಮಹೋತ್ಸವದ ಪ್ರಯುಕ್ತ ದೊಡ್ಡ ರಥೋತ್ಸವ ನೆರವೇರಿತು.






## ಶಿಕಾರಿಪುರ ಪ್ಯಾರಾ ಮೆಡಿಕಲ್ ಕಾಲೇಜಿಗೆ ಪ್ರವೇಶ ಪ್ರಾರಂಭ




## ಮತದಾನ ಜಾಗೃತಿ

ಶಿಕಾರಿಪುರ ಪುರಸಭೆ ವ್ಯಾಪ್ತಿ ತರಳುಬಾಳು ಕಲ್ಯಾಣ ಮಂಟಪದಲ್ಲಿ ನಡೆದ ವಿವಾಹ ಮಹೋತ್ಸವದಲ್ಲಿ ಮತದಾನ ಜಾಗೃತಿ ಕಾರ್ಯಕ್ರಮವನ್ನು ಪುರಸಭೆ ವತಿಯಿಂದ ಆಯೋಜಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ಎಂಸಿಸಿ ಅಧಿಕಾರಿಯಾದ ವೀರಭದ್ರಯ್ಯ ಎಸ್ಆರ್ ಜಿಲ್ಲಾ ಅಭಿಯಾನ ವ್ಯವಸ್ಥಾಪಕರಾದ ಸಮನ್ವಯ ಕಾಶಿ, ಪುರಸಭೆಯ ಕಂದಾಯ ಅಧಿಕಾರಿ ಪರಶುರಾಮಪ್ಪ, ಪುರಸಭೆಯ ಸಿಬ್ಬಂದಿಗಳಾದಂತಹ ಗೀತಾ , ಯಶೋಧ , ಕಂದಾಯ ನಿರೀಕ್ಷಕರಾದ ಹೊನ್ನಾಳಿ ಸುರೇಶ್ , ಅರುಣ್ ಕುಮಾರ್. ದೇವರಾಜ್, ರಾಘವೇಂದ್ರ, ಮೋಹನ್, ಸ್ವಾಮಿ, ಅಶ್ವಥ್ ,ರವಿ , ಸುರೇಶ್ ಹಾಗೂ ಮತದಾರರು ಭಾಗವಹಿಸಿದ್ದರು




## ಶಿಕಾರಿಪುರ ಕುಮದ್ವತಿ ಪಿಯು ಕಾಲೇಜು ಪ್ರವೇಶ ಪ್ರಾರಂಭ



## 18ಕ್ಕೆ ಬಿವೈಆರ್ ನಾಮಪತ್ರ ಸಲ್ಲಿಕೆ

‘ಏ.18ರಂದು ಬೆಳಿಗ್ಗೆ 9ಕ್ಕೆ ರಾಮಣ್ಣ ಶ್ರೇಷ್ಠಿ ಪಾರ್ಕ್‌ನಲ್ಲಿ ಪೂಜೆ ಸಲ್ಲಿಸಿ ಬೃಹತ್ ಮೆರವಣಿಗೆಯೊಂದಿಗೆ ಸಂಸದ ಬಿ.ವೈ. ರಾಘವೇಂದ್ರ ನಾಮಪತ್ರ ಸಲ್ಲಿಸಲಿದ್ದಾರೆ. ಸೀನಪ್ಪ ಶೆಟ್ಟಿ ವೃತ್ತದ ಬಳಿ ಸಾರ್ವಜನಿಕ ಸಭೆ ನಡೆಯಲಿದೆ’ ಎಂದು ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಟಿ.ಡಿ. ಮೇಘರಾಜ್ ಹೇಳಿದರು.

ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್. ಯಡಿಯೂರಪ್ಪ, ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ.ಕುಮಾರಸ್ವಾಮಿ, ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ, ಶಾಸಕರಾದ ಆರಗ ಜ್ಞಾನೇಂದ್ರ, ಚನ್ನಬಸಪ್ಪ, ಶಾರದಾ ಪೂರ್ಯಾನಾಯ್ಕ, ವಿಧಾನಪರಿಷತ್ ಸದಸ್ಯ ಡಿ.ಎಸ್. ಅರುಣ್, ಭಾರತಿಶೆಟ್ಟಿ, ಎಸ್. ರುದ್ರೇಗೌಡ, ಮಾಜಿ ಶಾಸಕರಾದ ಕುಮಾರ್ ಬಂಗಾರಪ್ಪ, ಅಶೋಕ್ ನಾಯ್ಕ, ಹರತಾಳು ಹಾಲಪ್ಪ, ಕೆ.ಬಿ. ಪ್ರಸನ್ನಕುಮಾರ್, ಎಂ.ಬಿ. ಭಾನುಪ್ರಕಾಶ್, ಆರ್.ಕೆ. ಸಿದ್ದರಾಮಣ್ಣ ಸೇರಿದಂತೆ ಅನೇಕರು ಭಾಗವಹಿಸಲಿದ್ದಾರೆ ಎಂದರು.



**ಮುಖಾಮುಖಿ** ಶಿವಮೊಗ್ಗದಲ್ಲಿ ಸೋಮವಾರ ಗೀತಾ ಶಿವರಾಜಕುಮಾರ್ ನಾಮಪತ್ರ ಸಲ್ಲಿಕೆ ವೇಳೆ ಜಿಲ್ಲಾಧಿಕಾರಿ ಕಚೇರಿಗೆ ಬಂದಿದ್ದ ಸಚಿವ ಮಧು ಬಂಗಾರಪ್ಪ, ಸಾಗರ ಶಾಸಕ ಬೇಳೂರು ಗೋಪಾಲಕೃಷ್ಣ, ಎರಡನೇ ಬಾರಿಗೆ ನಾಮಪತ್ರ ಸಲ್ಲಿಕೆಗೆ ಬಂದಿದ್ದ ಪಕ್ಷೇತರ ಅಭ್ಯರ್ಥಿ ಕೆ.ಎಸ್.ಈಶ್ವರಪ್ಪ ಪರಸ್ಪರ ಮುಖಾಮುಖಿಯಾದರು

**Top News** ಸಂಸದ ಬಿ.ವೈ.ರಾಘವೇಂದ್ರ

# ಬಿಜೆಪಿ ದೇಶದ ಅಭಿವೃದ್ಧಿಗೆ ಪೂರಕವಾದ ಪ್ರಣಾಳಿಕೆ ನೀಡಿದೆ

ಸುದ್ದಿ-ಸಂಚಾರಿ
ಶಿವಮೊಗ್ಗ:
'ದೇಶದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾದ ಪ್ರಣಾಳಿಕೆಯನ್ನು ಬಿಜೆಪಿ ಬಿಡುಗಡೆ ಮಾಡಿದೆ' ಎಂದು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಿ.ವೈ. ರಾಘವೇಂದ್ರ ಹೇಳಿದರು.

'ದೇಶದ ಅನೇಕ ಹಿರಿಯರು ಮತ್ತು ತಜ್ಞರು ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಸಲಹೆ ಮತ್ತು ಮಾರ್ಗದರ್ಶನ ನೀಡಿದ್ದಾರೆ. ಮುಂದಿನ 10 ವರ್ಷಗಳಲ್ಲಿ ಏನು ಮಾಡಬೇಕು ಎಂಬುದರ ಕುರಿತು 40 ಲಕ್ಷಕ್ಕೂ ಹೆಚ್ಚು ಸಾರ್ವಜನಿಕರು ನಮೋ ಆ್ಯಪ್ ಮೂಲಕ ಸಲಹೆ ನೀಡಿದ್ದರು. ಅದನ್ನು ಸ್ವೀಕರಿಸಿ ಪಕ್ಷದಿಂದ ಉತ್ತಮವಾದ ಪ್ರಣಾಳಿಕೆ ಘೋಷಿಸಲಾಗಿದೆ' ಎಂದು ಸೋಮವಾರ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

'ಆರ್ಥಿಕ ಮತ್ತು ರಾಜತಾಂತ್ರಿಕವಾಗಿ ಭಾರತವು ವಿಶ್ವದ ಶಕ್ತಿಶಾಲಿ ರಾಷ್ಟ್ರವಾಗಲು ಯೋಜನೆ ರೂಪಿಸಲಾಗಿದೆ. ಮೋದಿ ಸರ್ಕಾರ ಹಿಂದಿನ 10 ವರ್ಷಗಳಲ್ಲಿ ನಡೆಸಿದ ಆಡಳಿತವನ್ನು ಜನ ನೋಡಿದ್ದಾರೆ' ಎಂದರು.

'ಕಾಂಗ್ರೆಸ್ ಅವಧಿಯಲ್ಲಿ 10 ವರ್ಷದಲ್ಲಿ 2,800 ಮೆಗಾವ್ಯಾಟ್ ಸೋಲಾರ್ ಶಕ್ತಿ ಉತ್ಪತ್ತಿಯಾಗುತ್ತಿತ್ತು. ಮೋದಿ ಅವಧಿಯಲ್ಲಿ 72 ಸಾವಿರ ಮೆ.ವ್ಯಾ. ಸೋಲಾರ್ ವಿದ್ಯುತ್ ಉತ್ಪಾದಿಸಲಾಗುತ್ತಿದೆ. ಬರುವ ದಿನಗಳಲ್ಲಿ ಮನೆ ಮನೆಗಳಲ್ಲಿ ಸೋಲಾರ್ ವಿದ್ಯುತ್ ಉಚಿತ ಉತ್ಪಾದನೆ ಆಗಲಿದೆ. ಡಿಜಿಟಲ್ ಪೇಮೆಂಟ್ ಸಿಸ್ಟಂ, ಯುಪಿಐ, ಆರ್ಥಿಕ ಸ್ಥಿರತೆ ಕಾಪಾಡಿಕೊಂಡು ಬರಲಾಗಿದೆ. ಮಹಿಳೆಯರಿಗೆ ಶೇ 33 ರಷ್ಟು ಮೀಸಲಾತಿ ಘೋಷಣೆ ಮಾಡಲಾಗಿದೆ' ಎಂದು ಹೇಳಿದರು.

'ಒಂದು ಕೈಯಲ್ಲಿ ಕೊಟ್ಟು ಇನ್ನೊಂದು ಕೈಯಲ್ಲಿ ಕಿತ್ತುಕೊಳ್ಳುವ ಕಾಂಗ್ರೆಸ್‌ನ ಅಸಲಿ ಮುಖವನ್ನು ಜನರು ನೋಡಿದ್ದಾರೆ. ಏ.18 ಮತ್ತು 19ರಂದು ಕಾಂಗ್ರೆಸ್‌ನ ಪ್ರಮುಖರು ಬಿಜೆಪಿಗೆ ಸೇರ್ಪಡೆಯಾಗಲಿದ್ದಾರೆ' ಎಂದರು.

ಐಡಿಯಲ್ ಗೋಪಿ, ಮಾಜಿ ಎಂಜಿನಿಯರ್ ಆನಂದಮೂರ್ತಿ, ಮಹೇಶಮೂರ್ತಿ ನೇತೃತ್ವದಲ್ಲಿ ಹಲವರು ಬಿಜೆಪಿಗೆ ಸೇರ್ಪಡೆಗೊಂಡರು.

ವಿಧಾನಪರಿಷತ್ ಸದಸ್ಯ ಡಿ.ಎಸ್. ಅರುಣ್, ಮಾಲತೇಶ್, ನಾಗರಾಜ್, ಮೋಹನ್ ರೆಡ್ಡಿ, ಹರಿಕೃಷ್ಣ, ಜ್ಯೋತಿಪ್ರಕಾಶ್, ಅಣ್ಣಪ್ಪ, ಚಂದ್ರಶೇಖರ್ ಇದ್ದರು.

## 'ಕಾಂಗ್ರೆಸ್ ಮುಳುಗುತ್ತಿರುವ ಹಡಗು': ಯಡಿಯೂರಪ್ಪ

ಸುದ್ದಿ-ಸಂಚಾರಿ
ತ್ಯಾವಣಿಗೆ:
ಕಾಂಗ್ರೆಸ್ ಪಕ್ಷ ಮುಳುಗುತ್ತಿರುವ ಹಡಗು. 28 ಲೋಕಸಭಾ ಕ್ಷೇತ್ರಗಳಲ್ಲಿ ಗೆಲ್ಲುವ ಯಾವುದಾದರೂ 2-3 ಕ್ಷೇತ್ರಗಳ ಹೆಸರು ಹೇಳಿ ನೋಡೋಣ ಎಂದು ಬಿಜೆಪಿ ಸಂಸದೀಯ ಮಂಡಳಿ ಸದಸ್ಯ ಬಿ.ಎಸ್. ಯಡಿಯೂರಪ್ಪ ವ್ಯಂಗ್ಯವಾಡಿದರು.ಇಲ್ಲಿ ಸೋಮವಾರ ದಾವಣಗೆರೆ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಗಾಯಿತ್ರಿ ಸಿದ್ದೇಶ್ವರ ಪರವಾಗಿ ಹಮ್ಮಿಕೊಂಡಿದ್ದ ಪ್ರಚಾರ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.ರಾಜ್ಯದ 28 ಕ್ಷೇತ್ರಗಳಲ್ಲೂ ಬಿಜೆಪಿ ಗೆಲುವು ಸಾಧಿಸಲಿದೆ. ಹಣ, ಹೆಂಡ ಹಂಚಿ ಚುನಾವಣೆಯಲ್ಲಿ ಗೆಲ್ಲುವ ಕಾಲವಿತ್ತು. ಆದರೆ, ಕಾಲ ಬದಲಾವಣೆಯಾಗಿದೆ. ಪ್ರತಿಯೊಬ್ಬ ಮತದಾರನಿಗೂ ಚಿಂತನೆ ಮಾಡುವ ಶಕ್ತಿ ಇದೆ. ಕಾಂಗ್ರೆಸ್‌ನ ರಾಜಕೀಯ ಡೊಂಬರಾಟ ನಡೆಯುವುದಿಲ್ಲ ಎಂದು ತಿಳಿಸಿದರು.'ರೈತವಿರೋಧಿ, ಜನವಿರೋಧಿ, ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ವಿರೋಧಿ ಕಾಂಗ್ರೆಸ್ ಪಕ್ಷವನ್ನು ತಲೆ ಎತ್ತಲು ಬಿಡಬಾರದು. ಈ ಚುನಾವಣೆ ನಂತರ ಕಾಂಗ್ರೆಸ್‌ನ ಅಡ್ರೆಸ್ ಇರುವುದಿಲ್ಲ' ಎಂದರು.

## ನಾನು ಯಾವುದೇ ಪಕ್ಷದಲ್ಲಿ ಇಲ್ಲ: ಗೂಳಿಹಟ್ಟಿ ಶೇಖರ್

ಸುದ್ದಿ-ಸಂಚಾರಿ
ಶಿವಮೊಗ್ಗ
'ನಾನು ಈಗ ಯಾವುದೇ ಪಕ್ಷದಲ್ಲಿ ಇಲ್ಲ. ನನಗೆ ಯಾವುದೇ ಬಂಧನವೂ ಇಲ್ಲ. ನಾನು ಸ್ವತಂತ್ರ. ಹೀಗಾಗಿ ನಾನು ಯಾರ ಪರವಾಗಿ, ಎಲ್ಲಿ ಬೇಕಾದರೂ ಪ್ರಚಾರ ಮಾಡಬಹುದು. ಶಿವಮೊಗ್ಗದಲ್ಲಿ ಕೆ.ಎಸ್. ಈಶ್ವರಪ್ಪ ಹಾಗೂ ಚಿತ್ರದುರ್ಗದಲ್ಲಿ ಗೋವಿಂದ ಕಾರಜೋಳ ಅವರನ್ನು ಬೆಂಬಲಿಸಿ ಪ್ರಚಾರ ಮಾಡುತ್ತೇನೆ' ಎಂದು ಮಾಜಿ ಸಚಿವ ಗೂಳಿಹಟ್ಟಿ ಶೇಖರ್ ಹೇಳಿದರು.
'ಕೆಲವರು ಈ ಕುರಿತು ಅನಗತ್ಯ ಗೊಂದಲ ಸೃಷ್ಟಿ ಮಾಡಿ ಸಾಮಾಜಿಕ ಜಾಲತಾಣದಲ್ಲಿ ತಪ್ಪು ಮಾಹಿತಿ ಹರಿಬಿಡುತ್ತಿದ್ದಾರೆ' ಎಂದರು.
'ಶಿಕಾರಿಪುರ, ಶಿವಮೊಗ್ಗ ಗ್ರಾಮಾಂತರ, ಸೊರಬ ವಿಧಾನಸಭಾ ಕ್ಷೇತ್ರಗಳಲ್ಲಿ 1.30 ಲಕ್ಷ ಭೋವಿ ಜನಾಂಗದವರಿದ್ದಾರೆ. ಇವರೆಲ್ಲರೂ ನನ್ನ ಜೊತೆ ಸಂಪರ್ಕದಲ್ಲಿದ್ದಾರೆ. ಈಶ್ವರಪ್ಪ ಅವರಿಗೆ ಬೆಂಬಲ ನೀಡುವುದಾಗಿ ತಿಳಿಸಿದ್ದಾರೆ' ಎಂದು ಹೇಳಿದರು.